## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯು ನಡೆಸುವ ವಿಶೇಷ ಸಂಗೀತ, ನೃತ್ಯ, ಹಾಗೂ ತಾಳವಾದ್ಯ ಪರೀಕ್ಷೆಗಳನ್ನು ಕ.ರಾ.ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯಕ್ಕೆ ವಹಿಸಿಕೊಡುವ ಬಗ್ಗೆ.

------

ಓದಲಾಗಿದೆ :-

1. ಕುಲಸಚಿವರು, ಕರ್ನಾಟಕ ರಾಜ್ಯ ಡಾ|| ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿದ್ಯಾಲಯ, ಮೈಸೂರು ಇವರ ಪತ್ರ ದಿನಾಂಕ:23/08/2022
2. ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇತ್ರ ಪತ್ರ ಸಂಖ್ಯೆ:ವಿ1/ವಿ.ಸ.ಪ/ಹಸ್ತಾಂತರ ಬಗ್ಗೆ/20/22-23, ದಿ:07/11/2022.

**ಪ್ರಸ್ತಾವನೆ :-**

ಮೇಲೆ ಕ್ರಮಾಂಕ (1)ರಲ್ಲಿ ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯಕ್ಕೆ ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ ನಡೆಸುತ್ತಿರುವ ಎಲ್ಲಾ ಪರೀಕ್ಷೆಗಳನ್ನು ಹಸ್ತಾಂತರಿಸುವ ಕುರಿತು ದಿನಾಂಕ:19.08.2022 ರಂದು ನಿರ್ದೇಶಕರು ಪ್ರೌಢ ಶಿಕ್ಷಣ ಮಂಡಳಿ ಇವರೊಂದಿಗೆ ಮಾನ್ಯ ಕುಲಪತಿಗಳು.ಕುಲಸಚಿವರು ಹಾಗೂ ಆಡಳಿತಾಧಿಕಾರಿಗಳು ಇವರೊಂದಿಗೆ ದಿ:30/08/2021ರಂದು ನಡೆದ ಸಭೆಯಲ್ಲಿ ಮಾನ್ಯ ಕುಲಪತಿಯವರು ತಿಳಿಸಿದಂತೆ ವಿಶ್ವವಿದ್ಯಾಲಯವು ಪ್ರದರ್ಶನ ಕಲೆಗಳಿಗೆ ಸೀಮಿತವಾಗಿರುವ ಭಾರತದಲ್ಲಿ 2ನೇ ವಿಶ್ವವಿದ್ಯಾಲಯವಾಗಿರುವುದರಿಂದ ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿಯ ಅಡಿಯಲ್ಲಿ ಸಂಗೀತಾದಿ ಪ್ರದರ್ಶನ ಕಲೆಗಳನ್ನು ಉಳಿಸಿ ಬೆಳೆಸುವ ಪ್ರೋತ್ಸಾಹಿಸುವ, ಸಾಮಾನ್ಯ ಜನರಿಗೆ ತಲುಪಿಸುವ ಧ್ಯೇಯ ವಿಶ್ವವಿದ್ಯಾಲಯದ್ದಾಗಿರುತ್ತದೆ.ಈ ಹಿನ್ನಲೆಯಲ್ಲಿ ಸಭಾ ನಡಾವಳಿಯಲ್ಲಿ ಹಸ್ತಾಂತರಿಸಲು ತೀರ್ಮಾನಿಸಿರುವ ಎಲ್ಲಾ ವಿಷಯಗಳ ವಿದ್ವತ್ ಪೂರ್ವ ಮತ್ತು ವಿದ್ವತ್ ಅಂತಿಮ ಪರೀಕ್ಷೆಗಳನ್ನು ಕೂಡಲೇ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲು ಅದೇಶ ಹೊರಡಿಸುವಂತೆ ಹಾಗೂ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯಿಂದ ನಡೆಸುವ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳನ್ನು ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲು ಆಧೇಶ ಹೊರಡಿಸುವಂತೆ ಕೋರಿರುತ್ತಾರೆ.

ಮೇಲೆ ಕ್ರಮಾಂಕ (2)ರಲ್ಲಿ ವಿಶ್ವವಿದ್ಯಾಲಯದಲ್ಲಿ ವಿಶೇಷ ಸಂಗೀತ, ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳನ್ನು ಕರ್ನಾಟಕ ರಾಜ್ಯ ಡಾ|| ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯಕ್ಕೆ ವಹಿಸಿಕೊಡುವ ಸಂಬಂಧವಾಗಿ ಕುಲಸಚಿವರು ಪ್ರಸ್ತುತ ಸದರಿ ವಿಶ್ವವಿದ್ಯಾಲಯದಲ್ಲಿ ನುರಿತ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿದ್ದು ಪರೀಕ್ಷೆಗಳನ್ನು ನಡೆಸಲು ಅಗತ್ಯ ಮೂಲ ಸೌಲಭ್ಯಗಳನ್ನು ಹೊಂದಿರುವುದರಿಂದ ಮಂಡಳಿಯಿಂದ ನಡೆಸಲ್ಪಡುವ ವಿಶೇಷ ಸಂಗೀತ ಪರೀಕ್ಷೆಯ ಸಂಪೂರ್ಣ ಹೊಣೆಗಾರಿಕೆಯನ್ನು ವಿಶ್ವವಿದ್ಯಾಲಯಕ್ಕೆ ವಹಿಸುವಂತೆ ಕೋರಿರುತ್ತಾರೆ.

ಅದರಂತೆ ಮಂಡಳಿಯಲ್ಲಿ ಸಂಗೀತ ಜ್ಞಾನವುಳ್ಳ ಅಧಿಕಾರಿ/ಸಿಬ್ಬಂದಿಯ ಕೊರತೆಯಿರುವುದಿಂದ ಪರೀಕ್ಷೆಗಳನ್ನು ನಡೆಸುವ ಜವಾಬ್ದಾರಿಯನ್ನು ಸಂಗೀತ ವಿಶ್ವವಿದ್ಯಾಲಯಕ್ಕೆ ನೀಡಬಹುದಾಗಿದೆ. ಅದರಂತೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯ ಇತರೆ ಪರೀಕ್ಷೆಗಳ ವಿಭಾಗದಿಂದ ನಡೆಸಲಾಗುತ್ತಿರುವ ವಿಶೇಷ ಸಂಗೀತ ನೃತ್ಯ ಹಾಗೂ ತಾಳವಾದ್ಯ ಪರೀಕ್ಷೆಗಳನ್ನು ನಡೆಸುವ ಸಂಪೂರ್ಣ ಜವಬ್ದಾರಿಯನ್ನು ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸುವ ಬಗ್ಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇವರು ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಅದರಂತೆ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ : ಇಪಿ 37 ಎಸ್‌ಎಲ್‌ಬಿ 2020, ಬೆಂಗಳೂರು, ದಿನಾಂಕ :23ನೇ ನವೆಂಬರ್ 2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ ನಡೆಸುತ್ತಿದ್ದ ಸಂಗೀತ ಪರೀಕ್ಷೆ ಹಾಗೂ ಪ್ರದರ್ಶಕ ಕಲೆಗಳ ನೃತ್ಯ ಹಾಗೂ ತಾಳವಾದ್ಯಗಳಲ್ಲಿ ಜೂನಿಯರ್, ಸೀನಿಯರ್ ಮತ್ತು ವಿದ್ವತ್ ಪರೀಕ್ಷೆಗಳನ್ನು ನಡೆಸುವ ಮತ್ತು ಪ್ರಮಾಣ ಪತ್ರವನ್ನು ನೀಡುವ ಸಂಪೂರ್ಣ ಜವಾಬ್ದಾರಿಯನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿಯಿಂದ ಕರ್ನಾಟಕ ರಾಜ್ಯ ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವ ವಿದ್ಯಾಲಯಕ್ಕೆ ವಹಿಸಿಕೊಡಲು ಅನುಮತಿಸಿ ಆದೇಶಿಸಿದೆ.

ಈ ವಿಷಯಕ್ಕೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಸದರಿ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲು ಸೂಕ್ತ ಕ್ರಮವನ್ನು ಕೈಗೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

V.S. 23/11/2022

(ವಿ. ಶ್ರೀನಿವಾಸಮೂರ್ತಿ),
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

**ಇವರಿಗೆ :-**

1. ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು-560 001.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರುಗಿ.
4. ನಿರ್ದೇಶಕರು (ಪ್ರೌಢ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

5. ಕುಲಸಚಿವರು, ಕರ್ನಾಟಕ ರಾಜ್ಯ ಡಾ|| ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಧ್ಯಾಲಯ, ಮೈಸೂರು-570004.
6. ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.

ಪ್ರತಿ:

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿ (ಸೇವೆಗಳು-1) ರವರ ಆಪ್ತ ಸಹಾಯಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
4. ಶಾಖಾ ರಕ್ಷಾ ಕಡತ.